ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು-560001.

ಸಂಖ್ಯೆ: ಕಾಶಿಇ/ಶೈವಿ/157/ರಾ.ಮ.ದಿನ/2020-21 ದಿನಾಂಕ: 20.11.2021.

## ಸುತ್ತೋಲೆ

ವಿಷಯ: ಮತದಾರರ ಪಟ್ಟಿಗೆ ಹೆಸರುಗಳನ್ನು ಸೇರ್ಪಡೆ ಮಾಡುವ ಬಗ್ಗೆ.

ಉಲ್ಲೇಖ: ಮುಖ್ಯ ಚುನಾವಣಾ ಅಧಿಕಾರಿಗಳು, ಕರ್ನಾಟಕ, ರವರ ಪತ್ರ ಸಂಖ್ಯೆ:DPAR 27 SVEEP 2021 (Part-2) dt:08.11.2021.

* * * * * *

ಭಾರತದ ಚುನಾವಣಾ ಆಯೋಗವು ಭಾವೀ ಮತದಾರರಾದ ಇಂದಿನ ವಿದ್ಯಾರ್ಥಿಗಳು ಚುನಾವಣೆಯಲ್ಲಿ ಭಾಗವಹಿಸುವ ಉದ್ದೇಶದಿಂದ ಜನವರಿ 01.01.2022 ಕ್ಕೆ 18 ವರ್ಷ ಮೇಲ್ಪಟ್ಟ ವಿದ್ಯಾರ್ಥಿಗಳು ದಿನಾಂಕ:08.11.2021 ರಲ್ಲಿ ಬಿಡುಗಡೆಯಾಗಿರುವ ಕರಡು ಮತದಾರರ ಪಟ್ಟಿಯಲ್ಲಿ ಹೆಸರು ನೋಂದಣೆಯಾಗದಿದ್ದಲ್ಲಿ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ – 2022 ರನ್ವಯ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸಿ ಕಡ್ಡಾಯವಾಗಿ ಆನ್‌ಲೈನ್ ಮೂಲಕ ನಮೂನೆ -6 ರಲ್ಲಿ ವಿದ್ಯಾರ್ಥಿಗಳು ಹೆಸರು ನೋಂದಣೆ ಮಾಡಿಸುವ ಸಂಬಂಧ ಕಾಲೇಜಿನ ಪ್ರಾಂಶುಪಾಲರುಗಳು ಅಗತ್ಯವಾಗಿ ಈ ಕೆಳಗಿನಂತೆ ಸೂಚಿಸಲಾಗಿದೆ.

**ಸೂಚನೆ:**

1. ಪ್ರಾಂಶುಪಾಲರು / ಅಧ್ಯಾಪಕರು ಮತದಾರರ ಪಟ್ಟಿಗೆ ವಿದ್ಯಾರ್ಥಿಗಳ ಹೆಸರುಗಳನ್ನು ಸೇರ್ಪಡೆ ಮಾಡುವ ಕುರಿತು ಕಾಲೇಜಿನ ನೋಟೀಸ್‌ಬೋರ್ಡ್, ತರಗತಿಗಳು, ವಾಟ್ಸ್‌ಅಪ್ ಗ್ರೂಪ್‌ಗಳ ಮೂಲಕ ಹೆಚ್ಚಿನ ಪ್ರಚಾರ ಮಾಡುವಂತೆ ತಿಳಿಸಲಾಗಿದೆ.
2. ಈ ರೀತಿ ನೋಂದಾಯಿಸಲ್ಪಟ್ಟ ವಿದ್ಯಾರ್ಥಿಗಳ ಸ್ವೀಕೃತಿ ಪ್ರತಿಯನ್ನು ಪರಿಶೀಲಿಸಿ ಕ್ರೋಢೀಕೃತ ಮಾಹಿತಿಯನ್ನು ಜಂಟಿ ನಿರ್ದೇಶಕರ ಕಛೇರಿಗೆ ಸಲ್ಲಿಸಲು ಸೂಚಿಸಿದೆ.
3. ಈ ಸಂಬಂಧ ಜಂಟಿ ನಿರ್ದೇಶಕರ ಕಛೇರಿಗಳು ಜಿಲ್ಲಾವಾರು ಕ್ರೋಢೀಕೃತ ಮಾಹಿತಿಯನ್ನು ಕೇಂದ್ರ ಕಛೇರಿಗೆ ಸಲ್ಲಿಸಲು ಸೂಚಿಸಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು

**ಇವರಿಗೆ:**

1. ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಕಲಬುರಗಿ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.

**ಪ್ರತಿಯನ್ನು:**

1. ಮುಖ್ಯ ಚುನಾವಣಾಧಿಕಾರಿಗಳು, ಮುಖ್ಯಚುನಾವಣಾಧಿಕಾರಿಯವರ ಕಛೇರಿ, ನಿರ್ವಾಚನ ನಿಲಯ, ಶೇಷಾದ್ರಿ ರಸ್ತೆ, ಬೆಂಗಳೂರು-560 001.
2. ಕಛೇರಿ ಪ್ರತಿ.